ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಮಾನ್ಯ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯ ಕರ್ನಾಟಕ

ದಿನಾಂಕ : DATE : 22/03/2019

# ಶಾಸಕ ಜಾಧವ್‌ಗೆ ಸ್ಪೀಕರ್ ಬುಲಾವ್

**ಬೆಂಗಳೂರು :** ಶಾಸಕ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿರುವ ಡಾ.ಉಮೇಶ್ ಜಾಧವ್ ಅವರಿಗೆ ಸ್ಪೀಕರ್ ಕೆ.ಆರ್. ರಮೇಶ್‌ಕುಮಾರ್ ಮತ್ತೊಂದು ನೋಟಿಸ್ ಜಾರಿ ಮಾಡಿದ್ದು ಸೋಮವಾರ ವಿಚಾರಣೆಗೆ ಹಾಜರಾಗಲು ಸೂಚಿಸಿದ್ದಾರೆ. ಜತೆಗೆ ಅಂದು ಬೆಳಗ್ಗೆ 11 ಗಂಟೆಗೆ ವಿಚಾರಣೆಗೆ ಸಮಯ ನಿಗದಿಯಾಗಿದೆ.



''ಜಾಧವ್ ಅವರನ್ನು ಕಳೆದ ವಿಧಾನಸಭೆ ಚುನಾವಣೆಯಲ್ಲಿ ನಾವು ಬೆಂಬಲಿಸಿದ್ದೇವೆ. ಅವರು ಕಾಂಗ್ರೆಸ್‌ನಿಂದ ಸ್ಪರ್ಧಿಸಿ ಗೆಲುವು ಸಾಧಿಸಿದ್ದು ನಮ್ಮ ಪ್ರತಿನಿಧಿಯಾಗಿ ಕೆಲಸ ಮಾಡಬೇಕಿತ್ತು. ಅವರು ರಾಜೀನಾಮೆ ಸಲ್ಲಿಸಿ ಬೇರೆ ಪಕ್ಷಕ್ಕೆ ಸೇರಿರುವುದು ಸರಿಯಾದ ಕ್ರಮವಲ್ಲ. ಜಾಧವ್ ವಿರುದ್ಧ ಪಕ್ಷಾಂತರ ನಿಷೇಧ ಕಾಯಿದೆಯಡಿ ಶಿಸ್ತು ಕ್ರಮ ಕೈಗೊಳ್ಳಬೇಕು,'' ಎಂದು ಚಿಂಚೋಳಿ ಕ್ಷೇತ್ರದ ಕೆಲ ಸಂಘಟನೆ ಪ್ರತಿನಿಧಿಗಳು ಸ್ಪೀಕರ್ ಅವರಿಗೆ ದೂರು ಸಲ್ಲಿಸಿದ್ದರು.

ವಿಪ್ ಉಲ್ಲಂಘನೆ ಪ್ರಕರಣವಡಿ ಕಾಂಗ್ರೆಸ್‌ನಿಂದ ದೂರು ಸಲ್ಲಿಕೆಯಾದಾಗ ಲಿಖಿತ ಉತ್ತರ ನೀಡಿದ್ದ ಜಾಧವ್, ತಾವು ವಿಪ್ ಉಲ್ಲಂಘಿಸಿಲ್ಲ, ಕಾಂಗ್ರೆಸ್ ತೊರೆಯುವುದೂ ಇಲ್ಲವೆಂದು ಹೇಳಿಕೊಂಡಿದ್ದರು. ಈ ಬಗ್ಗೆಯೂ ಸ್ಪೀಕರ್ ವಿಚಾರಣೆಗೆ ಒಳಪಡಿಸಲಿದ್ದಾರೆ ಎಂದು ತಿಳಿದು ಬಂದಿದೆ.

## ಮಾ. 25ಕ್ಕೆ ವಿಚಾರಣೆ: ರಮೇಶ್ ಕುಮಾರ್

**ಕೋಲಾರ:** ಶಾಸಕ ಡಾ.ಉಮೇಶ್ ಜಾಧವ್ ಅವರ ರಾಜೀನಾಮೆ ಕುರಿತಂತೆ ಮಾ.25ರಂದು ವಿಧಾನಸೌಧದಲ್ಲಿ ವಿಚಾರಣೆ ನಡೆಯಲಿದೆ ಎಂದು ಸ್ಪೀಕರ್ ರಮೇಶ್ ಕುಮಾರ್ ಸುದ್ದಿಗಾರರಿಗೆ ತಿಳಿಸಿದ್ದಾರೆ. ''ಡಾ.ಉಮೇಶ್ ಜಾಧವ್ ಅವರು ರಾಜೀನಾಮೆ ನೀಡಿದ್ದಾರೆ. ಅವರ ಮತಕ್ಷೇತ್ರದ ಕೆಲವರು ಆಕ್ಷೇಪಣೆ ಸಲ್ಲಿಸಿದ್ದಾರೆ. ಆಕ್ಷೇಪಣೆ ಸಲ್ಲಿಸಿದಾಗ ವಿಚಾರಣೆ ಮಾಡಲು ನಿರ್ಬಂಧವಿರುತ್ತದೆ. ಈ ಬಗ್ಗೆ ಜಾಧವ್ ಅವರಿಗೂ ತಿಳಿವಳಿಕೆ ನೀಡಿದ್ದೇನೆ. ವಾದ ಕೇಳಿದ ಮೇಲೆ, ಕಾನೂನು ನೋಡಿ, ಪರಿಶೀಲಿಸಿ ಕ್ರಮ ಕೈಗೊಳ್ಳುತ್ತೇನೆ,'' ಎಂದಿದ್ದಾರೆ.

4